# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521

**ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.**

ಅಂತರ್ಜಾಲ : https://kptcl.karnataka.gov.in

ದೂರವಾಣಿ ಸಂಖ್ಯೆ : 080-22212343

ಇ-ಮೇಲ್ ವಿಳಾಸ : director.ahr.kptcl@gmail.com

## ಅಧಿಸೂಚನೆ

**ಸಂಖ್ಯೆ: ಕವಿಪ್ರನಿನಿ/ಬಿ16/21723/2021-22**

**ದಿನಾಂಕ:** 01 MAR 2023

**ವಿಷಯ:** ಕವಿಪ್ರನಿನಿಯಲ್ಲಿ ವಿವಿಧ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ, ದಾಖಲಾತಿಗಳ ಪರಿಶೀಲನೆಗಾಗಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

**ಉಲ್ಲೇಖ:**
1. ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ಬಿ16/21723/2021-22 ದಿನಾಂಕ: 01.02.2022.
2. ಆಪ್ಟಿಟ್ಯೂಡ್ ಮತ್ತು ಕನ್ನಡ ಭಾಷಾ ಪರೀಕ್ಷೆಯನ್ನು ನಡೆಸುವ ಬಗ್ಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಹೊರಡಿಸಲಾದ ಅಧಿಸೂಚನೆ ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿಆರ್02/2022 ದಿನಾಂಕ: 02.07.2022.
3. ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ದಿನಾಂಕ 04.02.2023 ಮತ್ತು 07.02.2023 ರಂದು ಪ್ರಕಟಿಸಲಾದ ಹುದ್ದೆವಾರು ಅರ್ಹತಾ ಪಟ್ಟಿ.

********

ಉದ್ಯೋಗ ಪ್ರಕಟಣೆ ಸಂಖ್ಯೆ ಕವಿಪ್ರನಿನಿ/ಬಿ16/21723/2021-22 ದಿನಾಂಕ 01.02.2022 ಕ್ಕೆ ಅನುಗುಣವಾಗಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಮತ್ತು ವಿವಿಧ ಎಸ್ಕಾಂಗಳಲ್ಲಿ ಸಹಾಯಕ ಇಂಜಿನಿಯರ್(ವಿದ್ಯುತ್/ಸಿವಿಲ್), ಕಿರಿಯ ಇಂಜಿನಿಯರ್(ವಿದ್ಯುತ್/ಸಿವಿಲ್) ಹಾಗೂ ಕಿರಿಯ ಸಹಾಯಕ ಹುದ್ದೆಗಳ ನೇರ ನೇಮಕಾತಿಗೆ ಆಪ್ಟಿಟ್ಯೂಡ್ ಪರೀಕ್ಷೆಯನ್ನು ಮತ್ತು ಕನ್ನಡ ಭಾಷಾ ಪರೀಕ್ಷೆಗಳನ್ನು ದಿನಾಂಕ: 23.07.2022, 24.07.2022 ಹಾಗೂ 07.08.2022 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ನಡೆಸಲಾಗಿರುತ್ತದೆ.

ಆಪ್ಟಿಟ್ಯೂಡ್ ಪರೀಕ್ಷೆಗಳಿಗೆ ಸಂಬಂಧಿಸಿದಂತೆ, ತಾತ್ಕಾಲಿಕ ಸರಿ ಉತ್ತರಗಳನ್ನು (key-answers) ಪ್ರಕಟಿಸಿದ ನಂತರ, ಅವುಗಳಿಗೆ ಅಭ್ಯರ್ಥಿಗಳಿಂದ ಆಕ್ಷೇಪಣೆಗಳನ್ನು ಪಡೆದು, ಅವುಗಳನ್ನು ಪರಿಶೀಲಿಸಿದ ನಂತರ ಆಪ್ಟಿಟ್ಯೂಡ್ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹತೆ ಗಳಿಸಿದ ಅಭ್ಯರ್ಥಿಗಳ ಹುದ್ದೆವಾರು ಅರ್ಹತಾ ಪಟ್ಟಿಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದವರು ತಮ್ಮ ಅಧಿಕೃತ ವೆಬ್‌ಸೈಟ್‌ನಲ್ಲಿ ದಿನಾಂಕ 04.02.2023 ಹಾಗೂ 07.02.2023 ರಂದು ಪ್ರಕಟಿಸಿರುತ್ತಾರೆ.

ಮುಂದುವರೆದು, ದಾಖಲಾತಿಗಳ ಪರಿಶೀಲನೆಗಾಗಿ, ಸೂಚಿತ ರಿಕ್ತ ಸ್ಥಾನಗಳ ಆಧಾರದ ಮೇಲೆ ಹುದ್ದೆವಾರು ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಕವಿಪ್ರನಿನಿ ವೆಬ್‌ಸೈಟ್ https://kptcl.karnataka.gov.in/ ರಲ್ಲಿ ಪ್ರಕಟಿಸಲಾಗಿದೆ. ಸದರಿ ಪಟ್ಟಿಯು ಆಯ್ಕೆ ಪಟ್ಟಿಯಾಗಿರುವುದಿಲ್ಲ. ದಾಖಲಾತಿ ಪರಿಶೀಲನೆಗೆ ಸಂಬಂಧಿಸಿದಂತೆ, ದಿನಾಂಕವನ್ನು ಮತ್ತು ಇತರೆ ಹೆಚ್ಚಿನ ಮಾಹಿತಿಯನ್ನು ನಂತರದಲ್ಲಿ ಕವಿಪ್ರನಿನಿ ವೆಬ್‌ಸೈಟ್ https://kptcl.karnataka.gov.in/ ರಲ್ಲಿ ಪ್ರಕಟಿಸಲಾಗುವುದು.

**ನಿರ್ದೇಶಕರು**
**(ಆಡಳಿತ ಮತ್ತು ಮಾ.ಸಂ.)**
**ಕವಿಪ್ರನಿನಿ, ಬೆಂಗಳೂರು**